# ಭಾಗ್ಯಜ್ಯೋತಿ



## ಭಾಗ್ಯಜ್ಯೋತಿ

### ಕತ್ತಲಿನಿಂದ ಬೆಳಕಿನೆಡೆಗೆ

ಭಾಗ್ಯಜ್ಯೋತಿ ಮತ್ತು ಕುಟೀರ ಜ್ಯೋತಿ ಯೋಜನೆಗಳಡಿ ದಿ. 13.5.2013ರವರೆಗೆ ಬಾಕಿ ಇರುವ ದಂಡ ಸಹಿತ ವಿದ್ಯುತ್ ಬಿಲ್‌ನ ಬಾಕಿಯನ್ನು ಸರ್ಕಾರ ಮನ್ನಾ ಮಾಡಿದೆ. ಸಾಲ ಬಾಕಿ ಇದ್ದು, ವಿದ್ಯುತ್ ಸಂಪರ್ಕ ಕಡಿತಗೊಳಿಸಿದ್ದಲ್ಲಿ ಅಂತಹ ಮನೆಗಳಿಗೆ ಮತ್ತೆ ವಿದ್ಯುತ್ ಸಂಪರ್ಕವನ್ನು ನೀಡಿದೆ. ಈ ಮೂಲಕ ಮತ್ತೆ ಬಡವರ ಮನೆಯಲ್ಲಿ ಬೆಳಕು ಮೂಡಿದೆ.





ಬಡತನ ರೇಖೆಗಿಂತ ಕೆಳಗಿರುವ ಗ್ರಾಮೀಣ ಜನರಿಗೆ ಉಚಿತ ವಿದ್ಯುತ್ ಸಂಪರ್ಕ ಕಲ್ಪಿಸಲು ಜಾರಿಯಾದ ಭಾಗ್ಯಜ್ಯೋತಿ ಯೋಜನೆಯಿಂದ ಕತ್ತಲಲ್ಲಿದ್ದ ಸಾವಿರಾರು ಜನರ ಮನೆಗಳಿಗೆ ಬೆಳಕು ಬರುವಂತೆ ಆಗಿತ್ತು. ವಿದ್ಯುತ್ ಕಂಪನಿಗಳು ಶುರುವಾದ ಮೇಲೆ, ಹೆಚ್ಚಿನ ವಿದ್ಯುತ್ ಬಳಸುತ್ತಿದ್ದಾರೆ ಎನ್ನುವ ಹಿನ್ನೆಲೆಯಲ್ಲಿ ಮಾಸಿಕ ಬಾಡಿಗೆ ನಿಗದಿಪಡಿಸಲಾಗಿತ್ತು. ಜೊತೆಗೆ, ಮೀಟರ್ ಅಳವಡಿಸುವ ಬಗ್ಗೆ ಚಿಂತನೆಗಳೂ ನಡೆದಿದ್ದವು. ಇದರ ನಡುವೆ ವಿದ್ಯುತ್ ಬಿಲ್ ಪಾವತಿ ಮಾಡದ ಭಾಗ್ಯ ಜೋತಿ ಸಂಪರ್ಕದಾರರಿಗೆ ವಿದ್ಯುತ್ ಕಂಪನಿಗಳು ವಿದ್ಯುತ್ ಪೂರೈಕೆ ಸ್ಥಗಿತಗೊಳಿಸಿದ್ದವು.

ಇದನ್ನು ಅರಿತಿದ್ದ ಮುಖ್ಯಮಂತ್ರಿಗಳು ಅಧಿಕಾರ ವಹಿಸಿಕೊಂಡ ಮೊದಲ ದಿನವೇ ಭಾಗ್ಯಜ್ಯೋತಿ ಯೋಜನೆಯಲ್ಲಿ ಹೆಚ್ಚುವರಿ ವಿದ್ಯುತ್ ಬಳಸಿ ಹಣ ಪಾವತಿಸದೆ ವಿದ್ಯುತ್ ಸಂಪರ್ಕ ಕಡಿತಕ್ಕೊಳಗಾಗಿದ್ದ ರಾಜ್ಯದ ಸುಮಾರು 20 ಲಕ್ಷ ಫಲಾನುಭವಿಗಳ ಬಾಕಿ ಶುಲ್ಕವಾದ 268 ಕೋಟಿ ರೂ.ಗಳನ್ನು ಮನ್ನಾ ಮಾಡಿದ್ದರು. ಜೊತೆಗೆ, ಯಾವುದೇ ಹೆಚ್ಚುವರಿ ಶುಲ್ಕ ವಿಧಿಸದೆ ಕೂಡಲೆ ಮರು ಸಂಪರ್ಕ ಒದಗಿಸುವಂತೆ ರಾಜ್ಯದ ಎಲ್ಲಾ ವಿದ್ಯುತ್ ಸರಬರಾಜು ಸಂಸ್ಥೆಗಳಿಗೆ ಸೂಚಿಸಿದ್ದರು. ಅದರಂತೆ ಬಡವರ ಮನೆಗಳಿಗೆ ಮತ್ತೆ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗಿದೆ. ಇದು ವಿದ್ಯುತ್ ಸಂಪರ್ಕ ಕಡಿತಕ್ಕೊಳಗಾಗಿದ್ದ ಭಾಗ್ಯಜ್ಯೋತಿ ಫಲಾನುಭವಿಗಳು 'ಕತ್ತಲಿನಿಂದ ಬೆಳಕಿನೆಡೆಗೆ' ಪಯಣಿಸಿದಂತಿದೆ.